ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೀದರ ಜಿಲ್ಲಾ ರಂಗಮಂದಿರಕ್ಕೆ ಬಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಚನ್ನಬಸವ ಪಟ್ಟದೇವರು ಇವರ ಹೆಸರನ್ನು ನಾಮಕರಣ ಮಾಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ:ಡಿಕೆಸಿ/25011/9/2019, ದಿನಾಂಕ:18.01.2020

****

ಪ್ರಸ್ತಾವನೆ:

ಬೀದರ ಜಿಲ್ಲೆಯ ಬಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಚನ್ನಬಸವ ಪಟ್ಟದೇವರು ಇವರ ಹೆಸರನ್ನು, ರಂಗಮಂದಿರಕ್ಕೆ ಇಡಲು ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿರುತ್ತಾರೆ. ಬೀದರ್ ಬಾಲ್ಕಿ ಹಿರೇಮಠ ಸಂಸ್ಥಾನದ ರಂಗಮಂದಿರಕ್ಕೆ ಪೂಜ್ಯ ಚನ್ನಬಸವ ಪಟ್ಟದೇವರು ಇವರ ಹೆಸರನ್ನು ರಂಗಮಂದಿರಕ್ಕೆ ಇಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್ ಇವರು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಬೀದರ್ ರಂಗಮಂದಿರಕ್ಕೆ ಪೂಜ್ಯ ಚನ್ನಬಸವ ಪಟ್ಟದೇವರು ಇವರ ಹೆಸರನ್ನು ನಾಮಕರಣ ಮಾಡುವ ಕುರಿತು ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಸರ್ಕಾರವನ್ನು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಗೆ ಮಾನ್ಯ ಇಲಾಖಾ ಸಚಿವರು ಅನುಮೋದನೆ ನೀಡಿರುವುದರಿಂದ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 184 ಕಸಧ 2019, ಬೆಂಗಳೂರು, ದಿನಾಂಕ: 30-01-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೀದರ ಜಿಲ್ಲಾ ರಂಗಮಂದಿರಕ್ಕೆ ಬಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಚನ್ನಬಸವ ಪಟ್ಟದೇವರು ಇವರ ಹೆಸರನ್ನು ನಾಮಕರಣ ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸರ
ಮತ್ತು ಅವರ ಹೆಸರಿನಲ್ಲಿ

30/1/20
(ಪಿ.ಎಸ್.ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಸಂಸ್ಕೃತಿ ಶಾಖೆ)

ಗೆ:

1) ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್.
3) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜೆ.ಸಿ.ರಸ್ತೆ, ಬೆಂಗಳೂರು.
4) ಮಾನ್ಯ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಧಾನಸೌಧ, ಬೆಂಗಳೂರು.
5) ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೀದರ್ ಜಿಲ್ಲೆ, ಬೀದರ್.
6) ಸರ್ಕಾರದ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ / ಉಪ ಕಾರ್ಯದರ್ಶಿ, ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.